## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸಿವಿಲ್ ಸೇವೆಗಳಲ್ಲಿನ ಸಮೂಹ ಎ ಮತ್ತು ಬಿ ಹುದ್ದೆಗಳ ನೇರನೇಮಕಾತಿಯಲ್ಲಿ ಸಮತಳ ಮೀಸಲಾತಿಯನ್ನು ಕಾರ್ಯಗತಗೊಳಿಸುವಾಗ ಅಂಗವಿಕಲರಿಗೆ ಪರಿಗಣಿಸಬೇಕಾದ ರೋಸ್ಟರ್ ಬಿಂದುಗಳ ಬಗ್ಗೆ ಸ್ಪಷ್ಟೀಕರಣ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 48 ಸೆನೆನಿ 2012, ದಿನಾಂಕ:10.06.2013**

**ಓದಲಾಗಿದೆ:**

1. ದಿನಾಂಕ 20–06–1995ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 8 ಸೆಹಿಮ 95.
2. ದಿನಾಂಕ 22–11–2002ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 97 ಸೆನೆನಿ 2002.
3. ದಿನಾಂಕ 3–9–2005ರ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್ಆರ್ಆರ್ 2000.
4. ದಿನಾಂಕ 5–9–2005ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 107 ಸೆನೆನಿ 2005.
5. ದಿನಾಂಕ 4–1–2008ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 53 ಸೆನೆನಿ 2007.
6. ದಿನಾಂಕ: 1–8–2009ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 128 ಸೆನೆನಿ 2006.
7. ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರು, ಕರ್ನಾಟಕ ಇವರ ಪತ್ರ ಸಂಖ್ಯೆ: ಅಂ.ಅ.ನಿ/ವಿ.ಚೇ–ಹು.ಗು/2011–12/1145. ದಿನಾಂಕ 23–02–2012.

**ಪ್ರಸ್ತಾವನೆ:**

ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 20–6–1995ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರಿ ಸೇವೆಗಳಲ್ಲಿ ನೇರನೇಮಕಾತಿಯಲ್ಲಿ ಭಾರತ ಸಂವಿಧಾನದ ಅನುಚ್ಛೇದ 16(4) ರನ್ವಯ ಅಳವಡಿಸಿಕೊಳ್ಳಬೇಕಾದ ಮೀಸಲಾತಿ ಪ್ರಮಾಣ ಮತ್ತು ಅದಕ್ಕಾಗಿ ಅನುಸರಿಸಬೇಕಾದ ರೋಸ್ಟರನ್ನು ನಿಗದಿಪಡಿಸಲಾಗಿದೆ.

ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 22–11–2002ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್–ಸಿ ಮತ್ತು ಗ್ರೂಪ್–ಡಿ ಹುದ್ದೆಗಳಿಗೆ ಮಾಡುವ ನೇರನೇಮಕಾತಿಯಲ್ಲಿ ಅಂಗವಿಕಲರಿಗೆ ಕಲ್ಪಿಸಿರುವ ಸಮತಳ ಮೀಸಲಾತಿಯೂ ಒಳಗೊಂಡಂತೆ ಇತರ ಸಮತಳ ಮೀಸಲಾತಿಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ ಸಾಮಾನ್ಯ ಅರ್ಹತೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರತಿ ಹಿಂದುಳಿದ ವರ್ಗಗಳಿಗೆ ಪ್ರತ್ಯೇಕವಾಗಿ ಲಭ್ಯವಾಗುವ 20 ರಿಕ್ತ ಸ್ಥಾನಗಳ ಸಮೂಹದಲ್ಲಿ ರೋಸ್ಟರ್ ಬಿಂದುಗಳನ್ನು ನಿಗದಿಪಡಿಸಲಾಗಿದೆ.

ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ 3–9–2005ರ ಅಧಿಸೂಚನೆಯಲ್ಲಿ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿ, 1977ರ ನಿಯಮ 9(1A)ಗೆ ತಿದ್ದುಪಡಿ ಮಾಡಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್ 'ಎ' ಮತ್ತು 'ಬಿ' ವೃಂದದ ಹುದ್ದೆಗಳಿಗೆ ಮಾಡುವ ನೇರನೇಮಕಾತಿಯಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಶೇ.3ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಲಾಗಿದೆ.

ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ 5-9-2005ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಸಮೂಹ-ಎ ಮತ್ತು ಬಿ ಹುದ್ದೆಗಳಿಗೆ ಮಾಡುವ ನೇರನೇಮಕಾತಿಯಲ್ಲಿ ಅಂಗವಿಕಲರಿಗೆ ಕಲ್ಪಿಸಿರುವ ಶೇಕಡಾ 3ರಷ್ಟು ಸಮತಳ ಮೀಸಲಾತಿಯನ್ನು ಜಾರಿಗೊಳಿಸಲು ಸೂಚನೆಗಳನ್ನು ನೀಡಲಾಗಿದೆ. ಈ ಆದೇಶದನ್ವಯ ಸಾಮಾನ್ಯ ಅರ್ಹತೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರತಿ ಹಿಂದುಳಿದ ವರ್ಗಗಳಿಗೆ ಪ್ರತ್ಯೇಕವಾಗಿ ಲಭ್ಯವಾಗುವ ರಿಕ್ತ ಸ್ಥಾನಗಳ ಸಮೂಹದಲ್ಲಿ ಪ್ರತಿ ನೂರರ ಒಂದು ಗುಂಪಿನಲ್ಲಿ 19, 59 ಮತ್ತು 99ನೇ ರೋಸ್ಟರ್ ಬಿಂದುಗಳನ್ನು ಅಂಗವಿಕಲ ಅಭ್ಯರ್ಥಿಗಳಿಗಾಗಿ ಮೀಸಲಿರಿಸತಕ್ಕದ್ದೆಂದು ಮತ್ತು ಈ ಮೂರು ಬಿಂದುಗಳಲ್ಲಿ 19ನೇ ಬಿಂದುವನ್ನು ದೃಷ್ಟಿ ಮಾಂದ್ಯರಿಗೆ, 59ನೇ ಬಿಂದುವನ್ನು ಶ್ರವಣ ದೋಷವುಳ್ಳವರಿಗೆ ಮತ್ತು 99ನೇ ಬಿಂದುವನ್ನು ಚಲನವಲನ ವೈಕಲ್ಯ ಇರುವ ಅಭ್ಯರ್ಥಿಗಳಿಗೆ ಮೀಸಲಿರಿಸತಕ್ಕದ್ದೆಂದು ಆದೇಶಿಸಲಾಗಿದೆ.

ಕ್ರಮ ಸಂಖ್ಯೆ (5) ಮತ್ತು (6)ರಲ್ಲಿ ಓದಲಾದ ದಿನಾಂಕ 4-1-2008ರ ಹಾಗೂ ದಿನಾಂಕ:1-8-2009ರ ಸರ್ಕಾರಿ ಆದೇಶಗಳಲ್ಲಿ, ಸಮತಳ ಮೀಸಲಾತಿ ಕಾರ್ಯಗತಗೊಳಿಸಲು ನಿಗದಿಪಡಿಸಲಾಗಿದ್ದ 20 ರಿಕ್ತ ಸ್ಥಾನಗಳ ಸಮೂಹದಲ್ಲಿ ಅಂಗವಿಕಲ ಆಭ್ಯರ್ಥಿಗಳಿಗೆ ಗುರುತಿಸಲಾಗಿದ್ದ ರೋಸ್ಟರಿನ 19ನೇ ಬಿಂದುವನ್ನು ಸಮೂಹ-ಸಿ ಮತ್ತು ಡಿ ಹುದ್ದೆಗಳಿಗೆ ಅನ್ವಯವಾಗುವಂತೆ ಮಾತ್ರ 4ನೇ ಬಿಂದುವಿಗೆ ಸ್ಥಳಾಂತರಿಸಲಾಗಿದೆ.

ಕ್ರಮ ಸಂಖ್ಯೆ (7)ರಲ್ಲಿ ಓದಲಾದ ದಿನಾಂಕ 23-02-2012ರ ಪತ್ರದಲ್ಲಿ ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರು, ಕರ್ನಾಟಕ ಇವರು ದಿನಾಂಕ 4-1-2008ರ ಸರ್ಕಾರಿ ಆದೇಶದಲ್ಲಿ, ಸಮತಳ ಮೀಸಲಾತಿ ಕಾರ್ಯಗತಗೊಳಿಸಲು ನಿಗದಿಪಡಿಸಲಾಗಿದ್ದ 20 ರಿಕ್ತ ಸ್ಥಾನಗಳ ಸಮೂಹದಲ್ಲಿ ಅಂಗವಿಕಲ ಆಭ್ಯರ್ಥಿಗಳಿಗೆ ಗುರುತಿಸಲಾಗಿದ್ದ 19ನೇ ಬಿಂದುವನ್ನು ಸಮೂಹ-ಸಿ ಮತ್ತು ಡಿ ಹುದ್ದೆಗಳಿಗೆ ಅನ್ವಯವಾಗುವಂತೆ ಮಾತ್ರ 4ನೇ ಬಿಂದುವಿಗೆ ಸ್ಥಳಾಂತರಿಸಲಾಗಿರುವುದರಿಂದ ಸಮೂಹ ಎ ಮತ್ತು ಬಿ ಹುದ್ದೆಗಳ ನೇರನೇಮಕಾತಿಯಲ್ಲಿ ಅಂಗವಿಕಲರಿಗೆ ಅನ್ಯಾಯವಾಗುತ್ತದೆ ಎಂದು ತಿಳಿಸಿ, ಸಮೂಹ-ಎ ಮತ್ತು ಬಿ ಹುದ್ದೆಗಳಿಗೂ ಸಹ ಸಾಮಾನ್ಯ ಅರ್ಹತೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರತಿ ಹಿಂದುಳಿದ ವರ್ಗಗಳಿಗೆ ಪ್ರತ್ಯೇಕವಾಗಿ ಲಭ್ಯವಾಗುವ ರಿಕ್ತ ಸ್ಥಾನಗಳ ಸಮೂಹದಲ್ಲಿ 4, 44 ಹಾಗೂ 84ನೇ ಬಿಂದುವನ್ನು ಗುರುತಿಸಿ ಆದೇಶ ಹೊರಡಿಸಲು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## <u>ಆದೇಶ</u>

ದಿನಾಂಕ 5-9-2005ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 107 ಸೆನೆನಿ 2005ನ್ನು ಪರಿಷ್ಕರಿಸಿ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಮಾಡುವ ನೇರನೇಮಕಾತಿಯಲ್ಲಿ ಅಂಗವಿಕಲರಿಗೆ ಕಲ್ಪಿಸಿರುವ ಶೇಕಡಾ

...3

3ರಷ್ಟು ಸಮತಳ ಮೀಸಲಾತಿಯೂ ಒಳಗೊಂಡಂತೆ ಇತರ ಸಮತಳ ಮೀಸಲಾತಿಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ ಸಾಮಾನ್ಯ ಅರ್ಹತೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರತಿ ಹಿಂದುಳಿದ ವರ್ಗಗಳಿಗೆ ಪ್ರತ್ಯೇಕವಾಗಿ ಲಭ್ಯವಾಗುವ ಪ್ರತಿ ನೂರರ ಒಂದು ಸಮೂಹದಲ್ಲಿ ಪ್ರತಿ 4, 44 ಮತ್ತು 84ನೇ ರೋಸ್ಟರ್ ಬಿಂದುಗಳನ್ನು ಅಂಗವಿಕಲ ಅಭ್ಯರ್ಥಿಗಳಿಗಾಗಿ ಮೀಸಲಿರಿಸತಕ್ಕದ್ದೆಂದು ಆದೇಶಿಸಲಾಗಿದೆ. ಅಂದರೆ, 4ನೇ ಬಿಂದುವನ್ನು ದೃಷ್ಟಿಮಾಂದ್ಯ (blindness or low vision), 44ನೇ ಬಿಂದುವನ್ನು ಶ್ರವಣ ದೋಷ (hearing impairment) ಮತ್ತು 84ನೇ ಬಿಂದುವನ್ನು ಚಲನವಲನ ವೈಕಲ್ಯ (locomotor disability or cerebral palsy) ಅಂಗವಿಕಲತೆ ಹೊಂದಿರುವವರಿಗೆ ಮೀಸಲಿರಿಸತಕ್ಕದ್ದು; ಒಂದು ವೇಳೆ ಈ ಬಿಂದುಗಳೆದುರು ನಿರ್ದಿಷ್ಟಪಡಿಸಿದ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಗುರುತಿಸಲಾದ ಬೇರೆ ಅಂಗವಿಕಲತೆಯುಳ್ಳವರನ್ನು ಈ ಬಿಂದುಗಳೆದುರು ಆಯ್ಕೆಗೆ ಪರಿಗಣಿಸತಕ್ಕದ್ದೆಂದು ಆದೇಶಿಸಲಾಗಿದೆ. ಈ ಆದೇಶವು ಭವಿಷ್ಯವರ್ತಿಯಾಗಿ ಜಾರಿಗೆ ಬರುತ್ತದೆ.

ಈ ಆದೇಶದ ಪೂರ್ವದಲ್ಲಿ ದಿನಾಂಕ 5-9-2005ರ ಆದೇಶದನ್ವಯ ನಿಗದಿಪಡಿಸಿರುವ ರೋಸ್ಟರನ್ನು ಜಾರಿಗೊಳಿಸಿದ್ದು, ಪ್ರತಿ ವರ್ಗದಡಿಯಲ್ಲಿ ಸಮತಳ ಮೀಸಲಾತಿ ರೋಸ್ಟರ್‌ನ 4ನೇ ಬಿಂದುವನ್ನು ದಾಟಿದ್ದು, 20ನೆಯ ಬಿಂದುವನ್ನು ತಲುಪದಿದ್ದಲ್ಲಿ, 20ನೆಯ ಬಿಂದುವಿನವರೆಗೆ ಆ ರೋಸ್ಟರನ್ನು ಚಾಲನೆಗೊಳಿಸತಕ್ಕದ್ದು. ಹಾಗೂ ನಂತರದಲ್ಲಿ ಒಂದನೇ ಬಿಂದುವಿನಿಂದ ಈ ಆದೇಶದಂತೆ ರೋಸ್ಟರನ್ನು ಚಾಲನೆಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ. ಮಂಗಳ ಜಿ.ಎಸ್.) 10/6/13
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1).

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ, ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, 600 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು-ಎ) ಗೆ ಒದಗಿಸುವಂತೆ ಕೋರಲಾಗಿದೆ.

...4

<u>ಪ್ರತಿ:</u>

1) ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2) ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳು
3) ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು
4) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
5) ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು/ಇಲಾಖಾ ಮುಖ್ಯಸ್ಥರುಗಳು
6) ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
7) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು-1
8) ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು.
9) ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11) ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12) ಕಾರ್ಯದರ್ಶಿ,ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13) ವಾರದ ರಾಜ್ಯಪತ್ರ/ರಕ್ಷಾ ಕಡತ/ಬಿಡಿ ಪ್ರತಿಗಳು.